**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅ.ದೇವೇಗೌಡ ರವರು ನೀಡಿರುವ ಶೂನ್ಯವೇಳೆಯ ಸೂಚನಾ ಪತ್ರಕ್ಕೆ ಉತ್ತರ**

---

**ವಿಷಯ: ರಾಜ್ಯದಲ್ಲಿ ಅದರಲ್ಲಿಯೂ ಬೆಂಗಳೂರು ನಗರದಲ್ಲಿ ಗಾಂಜಾ ಅವ್ಯವಹಾರ ನಿರಂತರವಾಗಿ ನಡೆಯುತ್ತಿದ್ದು, ಯುವ ಪೀಳಿಗೆಯು ಸಂಪೂರ್ಣವಾಗಿ ಗಾಂಜಾ ವ್ಯಸನಿಗಳಾಗುವ ಸಾಧ್ಯತೆಯಿದ್ದು, ಗಾಂಜಾ ಅವ್ಯವಹಾರವನ್ನು ತಡೆಗಟ್ಟುವಲ್ಲಿ ಸರ್ಕಾರವು ಸಮಪೂರ್ಣ ವಿಫಲವಾಗಿದ್ದು, ಈ ಕುರಿತು ವಿಷಯವನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಇಚ್ಛಿಸುತ್ತೇನೆ.**

**ಉತ್ತರ:**

ಬೆಂಗಳೂರು ನಗರದಲ್ಲಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಕುರಿತಂತೆ ಬೆಂಗಳೂರು ನಗರ ಪೊಲೀಸ್ ಠಾಣೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಂತಹ ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕ್ರಮಕೈಗೊಳ್ಳಲಾಗಿದೆ:

| ವರ್ಷ | ದಾಖಲಿಸಲಾದ ಪ್ರಕರಣಗಳು | | ದಸ್ತಗಿರಿ ಮಾಡಿದ ಆರೋಪಿಗಳ ಸಂಖ್ಯೆ | | ವಶಪಡಿಸಿಕೊಂಡ ಮಾದಕ ವಸ್ತುಗಳ ಪ್ರಮಾಣ |
|---|---|---|---|---|---|
| | ಪೆಡ್ಲರ್ | ವ್ಯಸನಿಗಳು | ಪೆಡ್ಲರ್ | ವ್ಯಸನಿಗಳು | |
| 2021 | 496 | 3859 | 1184 | 4569 | 3705 ಕೆ.ಜಿ. |
| 2022 | 579 | 3448 | 977 | 4238 | 4228 ಕೆ.ಜಿ. |
| 2023 | 677 | 2766 | 984 | 3415 | 5387 ಕೆ.ಜಿ. |
| 2024 | 36 | 0 | 57 | 0 | 85 ಕೆ.ಜಿ |

ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಮಾರಾಟ/ಸಾಗಾಣೆಯಲ್ಲಿ ತೊಡಗಿರುವ ವಿದೇಶಿಯರ ವಿರುದ್ಧ ದಾಳಿ ನಡೆಸಿ ಕಳೆದ ಮೂರು ವರ್ಷಗಳಲ್ಲಿ ದಾಖಲಿಸಲಾಗಿರುವ ಪ್ರಕರಣಗಳ ಅಂಕಿ-ಅಂಶಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ:

| ವರ್ಷ | ಎನ್.ಡಿ.ಪಿ.ಎಸ್ ಕಾಯ್ದೆಯಡಿ ವಿದೇಶಿಯರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ದಸ್ತಗಿರಿ ಮಾಡಲಾಗಿರುವ ಆರೋಪಿಗಳ ಸಂಖ್ಯೆ |
|---|---|---|
| 2021 | 143 | 186 |
| 2022 | 101 | 122 |
| 2023 | 81 | 99 |
| 2024 (ಜನವರಿ31ರವರೆಗೆ) | 8 | 9 |

ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಣೆಯಲ್ಲಿ ತೊಡಗುವ ವಿದೇಶಿಯರನ್ನು ದಸ್ತಗಿರಿ ಮಾಡಿ, ಸದರಿಯವರುಗಳನ್ನು ಅವರ ದೇಶಕ್ಕೆ ಗಡಿಪಾರು ಮಾಡಲು ಕ್ರಮ ಜರುಗಿಸಲಾಗಿದೆ, ವಿವರಗಳು ಈ ಕೆಳಕಂಡಂತಿದೆ:

| ವರ್ಷ | ಗಡಿಪಾರು ಮಾಡಲಾದ ವಿದೇಶಿಯರ ಸಂಖ್ಯೆ |
|---|---|
| 2021 | 35 |
| 2022 | 35 |
| 2023 | 226 |
| 2024 (ಜನವರಿ31ರವರೆಗೆ) | 22 |

ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಣಿಕೆಯಲ್ಲಿ ತೊಡಗಿದ ಆರೋಪಿಗಳ ವಿರುದ್ಧ PITNDPS-1988 ರ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗಿದೆ.

| ವರ್ಷ | PIT NDPS ಕಾಯ್ದೆ-1988ರ ಅಡಿ ದಾಖಲಿಸಲಾದ ಪ್ರಕರಣಗಳು | ದಸ್ತಗಿರಿ ಮಾಡಿದ ಆರೋಪಿಗಳ ಸಂಖ್ಯೆ |
|---|---|---|
| 2021 | 3 | 3 |
| 2022 | 3 | 3 |
| 2023 | 1 | 1 |

**ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಯುವ ಪೀಳಿಗೆ, ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟದ ಕುರಿತು ಜಾಗೃತಿ ಮೂಡಿಸಲು ಈ ಕೆಳಕಂಡ ಕ್ರಮಗಳನ್ನು ಜರುಗಿಸಲಾಗಿದೆ:**

- ಶಾಲಾ ಕಾಲೇಜುಗಳಲ್ಲಿ ಮಾದಕ ವಸ್ತುಗಳ ಬಗ್ಗೆ ಅರಿವು ಮೂಡಿಸಲು ವಿದ್ಯಾರ್ಥಿಗಳನ್ನು ಬಳಸಿಕೊಂಡು ಪೊಲೀಸ್ ಮಾರ್ಷಲ್‌ಗಳಾಗಿ ನೇಮಕ ಮಾಡಲಾಗಿದೆ. ಈ ರೀತಿ 700 ಪೊಲೀಸ್ ಮಾರ್ಷಲ್‌ಗಳನ್ನು ನೇಮಕ ಮಾಡಿ 40,000 ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿ ಕ್ರಮ ಕೈಗೊಳ್ಳಲಾಗಿದೆ.
- ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಡ್ರಗ್ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿ, ಉಪನ್ಯಾಸ, ದೃಶ್ಯ ರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗಿದೆ. ಶಾಲಾ ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ.
- ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ: **1908** ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.
- ವಿದೇಶಿ ವಿದ್ಯಾರ್ಥಿಗಳು, ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ತೊಡಗಿರುವ ಆರೋಪಿಗಳ ಮೇಲೆ ನಿಗಾವಹಿಸಿ ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಮತ್ತು ಅಂತಹವರ ವಿರುದ್ಧ ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.
- ಯುವಕರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಡ್ಯಾನ್ಸ್‌ಬಾರ್, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗಿದೆ.
- ಬೆಂಗಳೂರು ನಗರ ಪೊಲೀಸರು ವಿದ್ಯಾಸಂಸ್ಥೆಗಳ ಬಳಿ ಮಾದಕ ವಸ್ತು ಪದಾರ್ಥಗಳ ಮಾರಾಟ / ಸೇವನೆ ಮಾಡುತ್ತಿದ್ದವರ ವಿರುದ್ಧ ನಿರಂತರ ವಿಶೇಷ ಕಾರ್ಯಾಚರಣೆ ನಡೆಸಿ ಮಾರಾಟ ಮಾಡುತ್ತಿದ್ದವರು ಮತ್ತು ಸೇವನೆ ಮಾಡಿದವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ.
- ದಿನಾಂಕ 26.06.2023 ರಂದು ವಿಶ್ವ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಬೆಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಎಲ್ಲಾ ದರ್ಜೆಯ ಪೊಲೀಸ್ ಅಧಿಕಾರಿಗಳು, ಪೊಲೀಸ್ ಆಯುಕ್ತರಿಂದ ಪೊಲೀಸ್ ಉಪ ನಿರೀಕ್ಷಕರನ್ನು ಒಳಗೊಂಡಂತೆ, ಒಟ್ಟು 618 ಅಧಿಕಾರಿಗಳು, 388 ಶಾಲೆ, 253 ಕಾಲೇಜು ಹಾಗೂ 51 ವೃತ್ತಿನಿರತ ಕಾಲೇಜುಗಳಿಗೆ ಭೇಟಿ ನೀಡಿ, ಸುಮಾರು

1,95,000 ವಿದ್ಯಾರ್ಥಿಗಳಿಗೆ ಮಾದಕ ವಸ್ತು ದ್ರವ್ಯಗಳ ಸೇವನೆಯಿಂದ ಆಗುವ ಹಾನಿ ಹಾಗೂ ಎನ್.ಡಿ.ಪಿ.ಎಸ್ ಕಾಯ್ದೆ–1985ರ ಬಗ್ಗೆ ಅರಿವು ಮೂಡಿಸಲಾಗಿದೆ.

- ದಿನಾಂಕ:20.12.2023 ರಂದು 'ಅಪರಾಧ ತಡೆ ಮಾಸಾಚರಣೆ' ಅಂಗವಾಗಿ ಮಾದಕ ವಸ್ತುಗಳ ಕಳ್ಳಸಾಗಾಣಿಕೆ ಮತ್ತು ಸೇವನೆಯ ದುಷ್ಪರಿಣಾಮದ ಬಗ್ಗೆ ಶಾಲಾ ಕಾಲೇಜುಗಳಲ್ಲಿ ಜಾಗೃತಿ/ಅರಿವು ಮೂಡಿಸುವ ಸಲುವಾಗಿ ಬೆಂಗಳೂರು ನಗರದಾದ್ಯಂತ ಪೊಲೀಸ್ ಅಧಿಕಾರಿಗಳ ತಂಡ ಸಭೆಗಳನ್ನು ನಡೆಸಿ ಮಾದಕ ವ್ಯಸನ ಮತ್ತು ಅಕ್ರಮ ಕಳ್ಳಸಾಗಾಣಿಕೆ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸಿ ಜಾಗೃತಿ ಮೂಡಿಸುವ ಅಭಿಯಾನಗಳನ್ನು ನಡೆಸಿದರು. ಪೊಲೀಸ್ ಆಯುಕ್ತರನ್ನುಳಗೊಂಡಂತೆ ಒಟ್ಟು 750 ಅಧಿಕಾರಿಗಳು 747 ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ 1,72,608 ವಿದ್ಯಾರ್ಥಿಗಳಿಗೆ ಮಾದಕ ವಸ್ತು ದ್ರವ್ಯಗಳ ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗಿದೆ.

ಒಇ 12 ಪಿಎನ್‌ಡಿ 2024(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು